ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ    ದಿನಾಂಕ : DATE 18/6/2020

## ಮಣಿಪುರ ಸರ್ಕಾರಕ್ಕೆ ಸಂಕಷ್ಟ

**ಗುವಾಹಟಿ:** ಮಣಿಪುರದಲ್ಲಿ ಮೂರು ವರ್ಷದಿಂದ ಅಧಿಕಾರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರಕ್ಕೆ ಸಂಕಷ್ಟ ಎದುರಾಗಿದೆ. ಬಿಜೆಪಿಯ ಮೂವರು ಶಾಸಕರು ಬುಧವಾರ ರಾಜೀನಾಮೆ ನೀಡಿ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ. ಜತೆಗೆ ಪಕ್ಷೇತರರು ಸೇರಿ ಮಿತ್ರ ಪಕ್ಷಗಳ 6 ಶಾಸಕರು ಸರ್ಕಾರಕ್ಕೆ ನೀಡಿದ್ದ ಬೆಂಬಲ ಹಿಂಪಡೆದಿದ್ದಾರೆ. ಹೀಗಾಗಿ ಮುಖ್ಯಮಂತ್ರಿ ಎನ್. ಬಿರೆನ್ ಸಿಂಗ್ ನೇತೃತ್ವದ ಸರ್ಕಾರ ಅಲ್ಪಮತಕ್ಕೆ ಕುಸಿದಿದೆ. ಮೈತ್ರಿ ಪಕ್ಷವಾದ ನ್ಯಾಷನಲ್ ಪೀಪಲ್ಸ್ ಪಾರ್ಟಿಯ ನಾಲ್ವರು, ತೃಣಮೂಲ ಕಾಂಗ್ರೆಸ್‌ನ ಒಬ್ಬರು ಮತ್ತು ಓರ್ವ ಪಕ್ಷೇತರ ಶಾಸಕ ಸರ್ಕಾರಕ್ಕೆ ನೀಡಿದ್ದ ಬೆಂಬಲ ಹಿಂಪಡೆದಿದ್ದು, ತಾವು ಕಾಂಗ್ರೆಸ್‌ಗೆ ಬೆಂಬಲ ವ್ಯಕ್ತಪಡಿಸುವುದಾಗಿ ಘೋಷಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ವಿಶ್ವಾಸಮತ ಸಾಬೀತು ಪಡಿಸಲು ನಿರ್ದೇಶನ ಕೋರಿ ರಾಜ್ಯಪಾಲರನ್ನು ಭೇಟಿ ಮಾಡಲು ಮಣಿಪುರ ಕಾಂಗ್ರೆಸ್ ಸಜ್ಜಾಗಿದೆ.